# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 117 |
| 02. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ. ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 03. | ಉತ್ತರಿಸುವ ದಿನಾಂಕ | : | 10-07-2018 |
| 04. | ಉತ್ತರಿಸುವ ಸಚಿವರು. | : | ಉಪ ಮುಖ್ಯ ಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ನಗರ ಪ್ರದೇಶದಲ್ಲಿರುವ ಕೊಳಗೇರಿಗಳು ಅಪರಾಧದ ಕೇಂದ್ರಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಇದನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ. | ರಾಜ್ಯದ ನಗರ ಪ್ರದೇಶಗಳಲ್ಲಿರುವ ಕೊಳಗೇರಿಗಳಲ್ಲಿ ಅಪರಾಧಗಳನ್ನು ತಡೆಗಟ್ಟಲು ಸಾರ್ವಜನಿಕ ಸಭೆಗಳನ್ನು ಹಮ್ಮಿಕೊಂಡು ಅಪರಾಧಗಳ ಬಗ್ಗೆ ಅಲ್ಲಿನ ನಿವಾಸಿಗಳಿಗೆ ಅರಿವು ಮೂಡಿಸಲಾಗುತ್ತಿದೆ. ಕೊಳಗೇರಿ ಪ್ರದೇಶಗಳಲ್ಲಿ ಹಗಲು ಮತ್ತು ರಾತ್ರಿ ಗಸ್ತನ್ನು ಚುರುಕುಗೊಳಿಸಿ ಅಪರಾಧಗಳು ಸಂಭವಿಸದಂತೆ ಸೂಕ್ತ ಎಚ್ಚರ ವಹಿಸಲಾಗುತ್ತಿದೆ. ಕೊಳಗೇರಿ ಪ್ರದೇಶಗಳಲ್ಲಿ ನೆಲೆಸಿರುವ ರೌಡಿಗಳು, ಎಂ.ಓ. ಕ್ರಿಮಿನಲ್‌ಗಳು ಮತ್ತು ಸಮಾಜಘಾತುಕ ವ್ಯಕ್ತಿಗಳ ಮೇಲೆ ಸದಾ ನಿಗಾ ಇಟ್ಟು ಸೂಕ್ತ ಎಚ್ಚರಿಕೆ ನೀಡಲಾಗುತ್ತಿದೆ. ಕ್ರಿಯಾಶೀಲ ರೌಡಿಗಳು ಮತ್ತು ಕ್ರಿಮಿನಲ್‌ಗಳ ವಿರುದ್ಧ ಭದ್ರತಾ ಕಾಯ್ದೆ ಅಡಿಯಲ್ಲಿ ಕ್ರಮ ಜರುಗಿಸಿ ಅವರ ಚಟುವಟಿಕೆಗಳನ್ನು ನಿಯಂತ್ರಣದಲ್ಲಿಡುವುದಲ್ಲದೆ ಸದರಿಯವರು ಯಾವುದೇ ರೀತಿಯ ಅಪರಾಧಗಳು ಮತ್ತು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ಹಳ್ಳಿ ಪ್ರದೇಶಗಳಿಂದ ನಗರಕ್ಕೆ ಉದ್ಯೋಗ ಅರಿಸಿ ಆಗಮಿಸುವ ಯುವಕರು ಸರಿಯಾದ ಮಾಹಿತಿಯ ಕೊರತೆಯಿಂದ ಉದ್ಯೋಗ ದೊರೆಯದೆ ಸ್ಲಂವಾಸಿಗಳಾಗುತ್ತಿದ್ದು, ವಿದ್ಯಾವಂತ ಯುವಕ ಯುವತಿಯರ ಬಾಳು ನರಕವಾಗುತ್ತಿರುವುದು ಮತ್ತು ಯುವಕರು ಸಮಾಜ ಘಾತುಕ ಶಕ್ತಿಗಳ ಜತೆ ಸೇರಿ ಅಪರಾದಗಳನ್ನು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೊಳಗೇರಿಗಳಲ್ಲಿರುವ ವಿದ್ಯಾವಂತರು ಕ್ರಿಮಿನಲ್ | ಹಳ್ಳಿ ಪ್ರದೇಶಗಳಿಂದ ನಗರಕ್ಕೆ ಉದ್ಯೋಗ ಅರಸಿ ಬಂದ ಯುವಕರು ಸರಿಯಾದ ಮಾಹಿತಿ ಕೊರತೆಯಿಂದಾಗಿ ಉದ್ಯೋಗ ದೊರೆಯದೇ ಸ್ಲಂ ವಾಸಿಗಳಾಗಿ ಸಮಾಜ ಘಾತುಕ ಶಕ್ತಿಗಳ ಜೊತೆ ಸೇರಿ ಅಪರಾಧಗಳಲ್ಲಿ ಶಾಮೀಲಾಗುತ್ತಿರುವುದು ಕಂಡು ಬಂದಿರುವುದಿಲ್ಲ. ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಕೊಳಗೇರಿಗಳು ಸೇರಿದಂತೆ ಆಯಾ ಪೊಲೀಸ್ ಠಾಣಾ ಸರಹದ್ದಿನಲ್ಲಿ ಜಾರಿಗೆ ತರಲಾಗಿದೆ. ಅಧಿಕಾರಿಗಳು ಕೊಳೆಗೇರಿಗಳಿಗೆ ಆಗಿಂದಾಗ್ಗೆ ಭೇಟಿ ನೀಡಿ ಸಾರ್ವಜನಿಕರ ಸಭೆಗಳನ್ನು ಆಯೋಜಿಸಿ ಸೂಕ್ತ ತಿಳುವಳಿಕೆ ಮತ್ತು ಸಲಹೆ-ಸೂಚನೆಗಳನ್ನು ನೀಡಲಾಗುತ್ತಿದೆ. |

| | | |
|---|---|---|
| | ಆಗದಿರಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ: ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಕೊಳಗೇರಿಗಳಲ್ಲಿ ಜಾರಿಗೆ ತರಲಾಗಿದೆಯೋ? | ಇದಲ್ಲದೆ ರಾಜ್ಯದಲ್ಲಿ ಹೊಸ ಬೀಟ್ ಪದ್ಧತಿಯನ್ನು ಜಾರಿಗೊಳಿಸಿದ್ದು, ಈ ಹೊಸ ಬೀಟ್ ಪದ್ಧತಿ ಅಡಿಯಲ್ಲಿ ಸಾರ್ವಜನಿಕರನ್ನು ಸದಸ್ಯರನ್ನಾಗಿ ನೇಮಿಸಿಕೊಂಡಿದ್ದು, ಅವರ ಸಹಾಯ ಮತ್ತು ಸಹಕಾರದಿಂದ ಅಪರಾಧಗಳನ್ನು ತಡೆಗಟ್ಟಲು ಹಾಗೂ ಅಪರಾಧ ಮತ್ತು ಇನ್ನಿತರ ಅಕ್ರಮ ಚಟುವಟಿಕೆಗಳ ಮೇಲೆ ನಿಗಾ ಇಡಲು ಕ್ರಮ ಕೈಗೊಳ್ಳಲಾಗಿದೆ. |

ಸಂಖ್ಯೆ: ಒಇ 40 ಪಿಸಿಕ್ಯೂ 2018

(ಡಾ॥ ಜಿ.ಪರಮೇಶ್ವರ)
ಉಪ ಮುಖ್ಯ ಮಂತ್ರಿ